ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

7

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ದಿನಾಂಕ : DATE :

# ಆಸ್ತಿ ವಿವರ ಕೊಡದ 118 ಶಾಸಕರು

■ **ವಿಕ ಸುದ್ದಿಲೋಕ** ಬೆಂಗಳೂರು

ರಾಜ್ಯದ ಏಳು ಮಂದಿ ಸಚಿವರು ಹಾಗೂ 118 ಶಾಸಕರು ಗಡುವಿನೊಳಗೆ ತಮ್ಮ ಆಸ್ತಿ ವಿವರ ಸಲ್ಲಿಸಿಲ್ಲ ಎನ್ನುವುದು ಬೆಳಕಿಗೆ ಬಂದಿದೆ.

ಪ್ರತಿ ವರ್ಷ ಶಾಸನಸಭೆಗೆ ಆಯ್ಕೆಯಾದ ಸದಸ್ಯರು ತಮ್ಮ ಆಸ್ತಿ ವಿವರವನ್ನು ಆಯಾ ವರ್ಷದ ಜೂ.30ರೊಳಗೆ ಸಲ್ಲಿಸಬೇಕಿದೆ. ಆದರೆ, ಪ್ರಸಕ್ತ ಸಾಲಿಗೆ ಸಂಬಂಧಿಸಿದಂತೆ ಗಡುವಿನೊಳಗೆ ಆಸ್ತಿ ವಿವರ ಸಲ್ಲಿಸಲು ಸಚಿವರಾದ ಕೆ.ಎಸ್.ಈಶ್ವರಪ್ಪ, ಬಿ.ಶ್ರೀರಾಮುಲು, ಬಿ.ಸಿ.ಪಾಟೀಲ್, ಎಸ್.ಟಿ.ಸೋಮಶೇಖರ್, ಕೆ.ಗೋಪಾಲಯ್ಯ, ಎಚ್.ನಾಗೇಶ್ ಹಾಗೂ ಶ್ರೀನಿವಾಸ ಪೂಜಾರಿ ವಿಫಲರಾಗಿದ್ದಾರೆ. ಸಿಎಂ ಸಂಸದೀಯ ಕಾರ್ಯದರ್ಶಿ ರೇಣುಕಾಚಾರ್ಯ, ಕೆಪಿಸಿಸಿ ಅಧ್ಯಕ್ಷರೂ ಆಗಿರುವ ಹಿರಿಯ ಶಾಸಕ ಡಿ.ಕೆ. ಶಿವಕುಮಾರ್, ಆರಗ ಜ್ಞಾನೇಂದ್ರ, ರಾಮಲಿಂಗಾರೆಡ್ಡಿ ಸಹಿತ ವಿಧಾನಸಭೆಯ 74 ಸದಸ್ಯರು ಆಸ್ತಿ ವಿವರ ಸಲ್ಲಿಸಿಲ್ಲ. ಜತೆಗೆ ಮೇಲ್ಮನೆಯ ಪ್ರತಿಪಕ್ಷ ನಾಯಕ ಎಸ್.ಆರ್. ಪಾಟೀಲ್, ಉಪ



ಸಭಾಪತಿ ಎಸ್.ಎಲ್. ಧರ್ಮೇಗೌಡ ಸಹಿತ 44 ಸದಸ್ಯರು ಕೂಡ ಆಸ್ತಿ ವಿವರ ಸಲ್ಲಿಸಿಲ್ಲ.

ಇದಲ್ಲದೆ, ಕಾನೂನು ಸಚಿವ ಜೆ.ಸಿ.ಮಾಧುಸ್ವಾಮಿ, ಜಗದೀಶ್ ಶೆಟ್ಟರ್, ಸಿ.ಟಿ.ರವಿ, ಪ್ರತಿಪಕ್ಷ ನಾಯಕ ಸಿದ್ದರಾಮಯ್ಯ ಸಹಿತ ವಿಧಾನಸಭೆಯ 148 ಸದಸ್ಯರು, ಮೇಲ್ಮನೆಯ 61 ಸದಸ್ಯರು ಗಡುವಿನೊಳಗೆ ಆಸ್ತಿ ವಿವರ ಸಲ್ಲಿಸಿರಲಿಲ್ಲ. ಆ ಬಳಿಕ ಇವರೆಲ್ಲರೂ ಆಸ್ತಿ ವಿವರ ಸಲ್ಲಿಸಿದ್ದಾರೆ ಎಂಬ ಮಾಹಿತಿಯನ್ನು ಆರ್‌ಟಿಐ ಕಾರ್ಯಕರ್ತ ಎಚ್.ಎಂ.ವೆಂಕಟೇಶ್‌ಗೆ ಲೋಕಾಯುಕ್ತ ಸಂಸ್ಥೆ ಮಾಹಿತಿ ನೀಡಿದೆ.

## ಲೋಕಾಯುಕ್ತರೂ ಸಲ್ಲಿಸಿಲ್ಲ

ಲೋಕಾಯುಕ್ತ ನ್ಯಾ.ವಿಶ್ವನಾಥ ಶೆಟ್ಟಿ ತಾವು ಅಧಿಕಾರ ವಹಿಸಿಕೊಂಡಾಗಿನಿಂದಲೂ ಆಸ್ತಿ



ವಿವರ ಸಲ್ಲಿಸಿಲ್ಲ. ಲೋಕಾಯುಕ್ತ ಕಾಯಿದೆಯಲ್ಲಿ ಲೋಕಾಯುಕ್ತರು ಆಸ್ತಿ ವಿವರ ಸಲ್ಲಿಸುವ ಕುರಿತು ಸ್ಪಷ್ಟವಾಗಿ ತಿಳಿಸಿಲ್ಲ. ಹೀಗಾಗಿ, ಅವರು ಆಸ್ತಿ ವಿವರ ಸಲ್ಲಿಸಿಲ್ಲ. ಈ ವಿಷಯ ಆರ್‌ಟಿಐನಡಿ ಪಡೆದ ಮಾಹಿತಿಯಿಂದ ಬಹಿರಂಗವಾಗಿದೆ. ಈ ಹಿಂದೆ ಲೋಕಾಯುಕ್ತರಾಗಿದ್ದ ಎನ್.ಸಂತೋಷ್ ಹೆಗ್ಡೆ ಹಾಗೂ ಉಪ ಲೋಕಾಯುಕ್ತ ಸುಭಾಷ್ ಬಿ ಅಡಿ ಅವರು ತಾವೇ ಖುದ್ದು ಆಸ್ತಿ ವಿವರ ಸಲ್ಲಿಸಿ ಇತರರಿಗೆ ಮೇಲ್ಪಂಕ್ತಿ ಹಾಕಿಕೊಟ್ಟಿದ್ದರು.